6) ವೈದ್ಯನಾಥನ್ ಕಮಿಟಿಯ ಶಿಫಾರಸ್ಸಿನ ಪ್ರಕಾರ ಪ್ರಾಥಮಿಕ ಸಹಕಾರ ಪತ್ತಿನ ಸಂಸ್ಥೆಗಳಿಗೆ ಹಣಕಾಸು ನೆರವು ನೀಡಲು ಯೋಜನೆ ತಯಾರಿಸಲಾಗುತ್ತಿದೆ.

7) ಅಲ್ಲದೆ ತೀರ ನಷ್ಟದಲ್ಲಿರುವ ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕುಗಳಿಗೆ ಅದರಲ್ಲೂ ಧಾರವಾಡ ಜಿಲ್ಲೆ, ಕೋಲಾರ ಮತ್ತು ಬೆಂಗಳೂರು ಜಿಲ್ಲೆ ಹಾಗೂ ಬೆಂಗಳೂರು (ಗ್ರಾ) ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕುಗಳಿಗೆ ವಿಶೇಷ ಸವಲತ್ತುಗಳನ್ನು ನೀಡಿ ಬಡ್ಡಿ ಮನ್ನಾ ಮಾಡಲಾಗಿದೆ.

8) ಅಪೆಕ್ಸ್ ಬ್ಯಾಂಕಿನ ಸ್ವಂತ ಬಂಡವಾಳದಿಂದ ಬೆಳೆಸಾಲ ನೀಡಲಾಗುತ್ತಿದೆ.

9) ವ್ಯಾಪಾರಭಿವೃದ್ಧಿ ಯೋಜನೆ (ಬಿಡಿಪಿ)ಯನ್ನು ಅಳವಡಿಸಿ ಸಂಘಗಳಿಗೆ ಬ್ಯಾಂಕಿನ ಕೌಂಟರ್ ನೀಡಲು ಹಣಕಾಸು ಒದಗಿಸಲಾಗುತ್ತಿದೆ.

10) ಸಿಬ್ಬಂದಿಗಳಿಗೆ ಮತ್ತು ಆಡಳಿತ ಮಂಡಳಿಯವರಿಗೆ ಸಂಘಗಳನ್ನು ಲಾಭದಾಯಕವಾಗಿ ನಡೆಸಲು ಅನುವಾಗುವಂತೆ ತರಬೇತಿ ನೀಡಲಾಗುತ್ತಿದೆ.

11) ಸಂಘಗಳ ಸ್ವಂತ ಬಂಡವಾಳ ಹೆಚ್ಚಿಸಲು ಸಹಕಾರ ಸಂಘಗಳಲ್ಲಿ ಸ್ತ್ರೀ ಶಕ್ತಿ ಗುಂಪುಗಳು ಮತ್ತು ಸ್ವಸಹಾಯ ಗುಂಪುಗಳನ್ನು ಸದಸ್ಯರಾಗಿ ಮಾಡಲಾಗುತ್ತಿದೆ.

12) ಸಂಘಗಳ ಶೇರುಬಂಡವಾಳ ಹೆಚ್ಚಿಸುವ ಸಲುವಾಗಿ ಪರಿಶಿಷ್ಟ ಜಾತಿ/ಪಂಗಡ ಹಿಂದುಳಿದ ಮತ್ತು ಅಲ್ಪ ಸಂಖ್ಯಾತರನ್ನು ಸದಸ್ಯರನ್ನಾಗಿ ಮಾಡಿ ಅವರ ಶೇರು ಮೊಬಲಗನ್ನು ಸರ್ಕಾರವೇ ಭರಿಸುತ್ತಿದೆ.

1202 (1516) ಶ್ರೀ ರವಿ. ಸಿ.ಟಿ.(ಚಿಕ್ಕಮಗಳೂರು) : ಮಾನ್ಯ ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಹಳೆ ಬಿಪಿಎಲ್ ಪಡಿತರ ಕಾರ್ಡುದಾರರಿಗೆ ಸ್ವೀಕೃತಿ ಪತ್ರದ ಆಧಾರದ ಮೇಲೆ ಪಡಿತರ ನೀಡುತ್ತಿದ್ದನ್ನು ನಿಲ್ಲಿಸಿರುವುದರಿಂದ ಬಡಜನರಿಗೆ ಅನ್ಯಾಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಈ ರೀತಿ ತೊಂದರೆಯಾಗಿರುವ ಪಡಿತರದಾರರ ಸಂಖ್ಯೆ ಎಷ್ಟು? (ಜಿಲ್ಲಾವಾರು ವಿವರ ನೀಡುವುದು)

ಇ) ಈ ಬಡ ಪಡಿತರದಾರರಿಗೆ ಪಡಿತರ ಪೂರೈಸುವ ಬಗ್ಗೆ ಸರ್ಕಾರದ ಕ್ರಮವೇನು?

ಶ್ರೀ ಗೋವಿಂದ ಎಂ.ಕಾರಜೋಳ (ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು) :

ಅ) ರಾಜ್ಯದಲ್ಲಿ ಮನೆ ಮನೆ ಸಮೀಕ್ಷೆ ಮೂಲಕ ಸ್ವೀಕೃತಿ ಪತ್ರ ಪಡೆದ ಕಾರ್ಡುದಾರರೂ ಸೇರಿದಂತೆ ಎಲ್ಲಾ ಕುಟುಂಬಗಳ ಸಮೀಕ್ಷೆ ಕೈಗೊಂಡು ಅರ್ಹ ಫಲಾನುಭವಿಗಳಿಗೆ ತಾತ್ಕಾಲಿಕ ಬಿಪಿಎಲ್ ಕೂಪನ್‌ಗಳನ್ನು ಈಗಾಗಲೇ ವಿತರಿಸಲಾಗಿದೆ, ಅಲ್ಲದೇ ಯಾವುದೇ ಪಡಿತರ ಚೀಟಿ ಹೊಂದಿಲ್ಲದೆ ಕೈಬಿಟ್ಟು ಹೋಗಿರುವ ಅರ್ಹ ಕುಟುಂಬಗಳನ್ನು ಗುರುತಿಸಿ ಅವರಿಗೂ ಅರ್ಹತೆ ಗನುಗುಣವಾಗಿ ಕೂಪನ್‌ಗಳನ್ನು ವಿತರಿಸಲು ಈಗಾಗಲೇ ಜಿಲ್ಲಾಧಿಕಾರಿಗಳಿಗೆ ಸೂಚಿಸಲಾಗಿರುತ್ತದೆ.

ಆ) ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ತಿರುಮಲದಲ್ಲಿ ಹೊಸ ಕೊಠಡಿಗಳ ನಿರ್ಮಾಣ

1206 (1543) ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್.(ಚಾಮರಾಜ) : ಮಾನ್ಯ ಮೀನುಗಾರಿಕೆ ಮತ್ತು ಮುಜರಾಯಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ತಿರುಮಲದಲ್ಲಿ ಕರ್ನಾಟಕದ ಮುಜರಾಯಿ ಇಲಾಖೆಗೆ ಸೇರಿದ ಅತಿಥಿ ಗೃಹದಲ್ಲಿರುವ ಕೊಠಡಿಗಳ ಸಂಖ್ಯೆ ಎಷ್ಟು?

ಆ) ಕಳೆದ ಮೂರು ವರ್ಷಗಳಲ್ಲಿ ಅಲ್ಲಿ ಕೊಠಡಿಗಳ ಅಭಿವೃದ್ಧಿಗೆ ಖರ್ಚು ಮಾಡಲಾದ ಹಣವೆಷ್ಟು? (ವಿವರ ನೀಡುವುದು)

ಇ) ಹಾಲಿ ಇರುವ ಕೊಠಡಿಗಳು ಸಾಕಾಗದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಈ) ಹಾಗಿದ್ದಲ್ಲಿ, ಹೆಚ್ಚೆಚ್ಚು ಕೊಠಡಿಗಳನ್ನು ನಿರ್ಮಿಸಲು ಕ್ರಮ ಕೈಗೊಳ್ಳಲಾಗುವುದೇ?